# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1378 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 24.12.2021 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಹಿಂದುಳಿದ ವರ್ಗಗಳ ವಸತಿ ಶಾಲೆಗಳಲ್ಲಿ ವಾಸವಿರುವ ಮಕ್ಕಳಿಗೆ ಅಧಿಕಾರಿಗಳು ರೂಮಿನಲ್ಲಿ ಕೂಡಿ ಹಾಕಿಕೊಂಡು ದೈಹಿಕವಾಗಿ ಹಲ್ಲೆ ನಡೆಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದೆವೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು) | ಇಲ್ಲ.<br>ಆದರೆ ಮೊರಾರ್ಜಿ ದೇಸಾಯಿ ವಸತಿ ಶಾಲೆ (ಹಿಂ.ವರ್ಗ:314) ರೇವಗಿ ಚಿತ್ತಾಪುರ ತಾಲ್ಲೂಕು, ಕಲಬುರ್ಗಿ ಜಿಲ್ಲೆ ಇಲ್ಲಿ ದಿ: 02.10.2021ರಂದು ಪ್ರಾಂಶುಪಾಲರ ನೇತೃತ್ವದಲ್ಲಿ ಆಯೋಜಿಸಲಾಗಿದ್ದ ಸ್ವಚ್ಛತಾ ಕಾರ್ಯಕ್ರಮದಲ್ಲಿ, ದೈಹಿಕ ಶಿಕ್ಷಣ ಶಿಕ್ಷಕರು, 10ನೇ ತರಗತಿಯ ವಿದ್ಯಾರ್ಥಿಯು ಸ್ವಚ್ಛತಾ ಕೆಲಸವನ್ನು ನಿರ್ವಹಿಸಿರುವುದಿಲ್ಲ ಎಂಬ ಕಾರಣಕ್ಕೆ ಥಳಿಸಿರುವ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸುದ್ದಿ ಪ್ರಕಟವಾಗಿದೆ.<br><br>ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಸದರಿ ವಸತಿ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಿಗೆ ಕರ್ತವ್ಯ ಲೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರನ್ವಯ ಕಾರಣ ಕೇಳಿ ನೋಟೀಸ್ ಜಾರಿಮಾಡಲಾಗಿದೆ. ಹಾಗೂ ತಕ್ಷಣದಿಂದಲೇ ಸದರಿ ದೈಹಿಕ ಶಿಕ್ಷಣ ಶಿಕ್ಷಕರನ್ನು ವಿಚಾರಣೆ ಕಾಯ್ದಿರಿಸಿ, ಪ್ರಕರಣ ನಡೆದ ವಸತಿ ಶಾಲೆಯಿಂದ ಮತ್ತೊಂದು ಶಾಲೆಗೆ ನಿಯೋಜಿಸಲಾಗಿರುತ್ತದೆ. ಆರೋಪಿತ ದೈಹಿಕ ಶಿಕ್ಷಣ ಶಿಕ್ಷಕರ ಮೇಲೆ ವಿಚಾರಣೆಯನ್ನು ಕೈಗೊಂಡು ನಿಯಮಾನುಸಾರ ಸೂಕ್ತ ಶಿಸ್ತು ಕ್ರಮ ವಹಿಸಲಾಗಿರುತ್ತದೆ. |
| ಆ) | ಸದರಿ ಪ್ರಕರಣಗಳು ನಿಜವೇ ಆಗಿದ್ದಲ್ಲಿ, ಸರ್ಕಾರದಿಂದ ರಾಜ್ಯದ ಹಿಂದುಳಿದ ವರ್ಗಗಳ ಎಲ್ಲಾ ವಸತಿ ಶಾಲೆಗಳಲ್ಲಿ ಮಕ್ಕಳ ಮೇಲಿನ ದೈಹಿಕ ಹಲ್ಲೆ ಕುರಿತ ವಿಚಾರದಲ್ಲಿ ತನಿಖೆ ನಡೆಸಲು ಕ್ರಮ ಕೈಗೊಂಡಿದೆಯೇ; (ವಿವರ ನೀಡುವುದು) | |
| ಇ) | ಮಕ್ಕಳ ಮೇಲಿನ ಹಲ್ಲೆ ಪ್ರಕರಣಗಳನ್ನು ತಡೆಯಲು ಸರ್ಕಾರದ ನಿಲುವೇನು? (ಸ್ಪಷ್ಟವಾದ ಮಾಹಿತಿಯನ್ನು ಒದಗಿಸುವುದು) | ವಸತಿ ಶಾಲೆಗಳ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗದವರಿಗೆ ಕಾರ್ಯಗಾರವನ್ನು ಏರ್ಪಡಿಸಿ ಮಕ್ಕಳ ಮೇಲೆ ಯಾವುದೇ ರೀತಿಯ ದೌರ್ಜನ್ಯ/ಹಲ್ಲೆ ಮಾಡದಂತೆ ತಿಳುವಳಿಕೆ ನೀಡಲಾಗಿದೆ. ಮುಂದುವರೆದು, ಇಂತಹ ಪ್ರಕರಣಗಳು ದಾಖಲಾದಲ್ಲಿ, ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮಗಳನ್ವಯ ಶಿಸ್ತು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಹಿಂವಕ 801 ಬಿಎಂಎಸ್ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು